ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : **701**
ಸದಸ್ಯರ ಹೆಸರು : ಶ್ರೀಮತಿ ಎಸ್.ವೀಣಾ ಅಚ್ಚಯ್ಯ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ : 04.03.2021
ಉತ್ತರಿಸುವ ಸಚಿವರು ಮುಖ್ಯಮಂತ್ರಿಗಳು

*****

	ಪ್ರಶ್ನೆ	ಉತ್ತರ
ಅ)	ಕೊಡಗು ಜಿಲ್ಲೆಯಲ್ಲಿನ ಕಾಫಿ ಬೆಳೆಗಾರರು ತಮ್ಮ ಕಾಫಿ ಬೆಳೆಗೆ ಸ್ಪ್ರಿಂಕ್ಲರ್ ಮಾಡಲು ವರ್ಷದಲ್ಲಿ 3 ತಿಂಗಳು ಮಾತ್ರ ಉಪಯೋಗಿಸುವ ಪಂಪ್‌ಸೆಟ್‌ಗಳಿಗೆ ಇಡೀ ವರ್ಷಕ್ಕೆ ಅನ್ವಯಿಸುವಂತೆ ಕನಿಷ್ಟ ದರ ನಿಗದಿ ಮಾಡಿ ಹಣ ವಸೂಲಿ ಮಾಡುತ್ತಿರುವುದರಿಂದ, ಈಗಾಗಲೇ ನಷ್ಟದಲ್ಲಿರುವ ಕಾಫಿ ಬೆಳೆಗಾರರು ಮತ್ತಷ್ಟು ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:	• ರಾಜ್ಯದಲ್ಲಿನ ಎಲ್ಲಾ ವಿದ್ಯುತ್ ಗ್ರಾಹಕರು ಬಳಸುವ ವಿವಿಧ ರೀತಿಯ ವಿದ್ಯುತ್ ಬಳಕೆಗೆ ಜಕಾತಿಗಳನ್ನು ನಿಗದಿಪಡಿಸಿ ವಿದ್ಯುತ್ ದರಗಳನ್ನು ನಿಗದಿಪಡಿಸುವುದು ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗದ ವ್ಯಾಪ್ತಿಗೆ ಒಳಪಟ್ಟಿದ್ದು, ಸರ್ಕಾರದ ವ್ಯಾಪ್ತಿಗೆ ಬರುವುದಿಲ್ಲ. • ಅದರಂತೆ, ಕರ್ನಾಟಕ ವಿದ್ಯುಚ್ಛಕ್ತಿ ನಿಯಂತ್ರಣ ಆಯೋಗವು ಕಾಲಕಾಲಕ್ಕೆ ಅನುಮೋದಿಸಿ ನಿಗದಿಪಡಿಸುವ ದರಗಳಂತೆ ರಾಜ್ಯದಲ್ಲಿನ ಖಾಸಗೀ ತೋಟಗಾರಿಕೆ ನರ್ಸರಿಗಳು, ಕಾಫಿ, ಟೀ ಮತ್ತು ರಬ್ಬರ್ ಪ್ಲಾಂಟೇಷನ್‌ಗಳನ್ನು ಹೊಂದಿರುವ 10 ಹೆಚ್.ಪಿ. ವರೆಗಿನ ಹಾಗೂ 10 ಹೆಚ್.ಪಿ.ಗೂ ಮೇಲ್ಪಟ್ಟ ವಿದ್ಯುತ್ ಸ್ಥಾವರಗಳ ಗ್ರಾಹಕರುಗಳು ವಿದ್ಯುತ್ ಬಳಕೆಗನುಸಾರವಾಗಿ ವಿದ್ಯುತ್ ಶುಲ್ಕವನ್ನು ಪಾವತಿಸಬೇಕಾಗಿರುತ್ತದೆ.
ಆ)	ಬಂದಿದ್ದಲ್ಲಿ, ಸದರಿ ಪಂಪ್‌ಸೆಟ್‌ಗಳಿಗೆ ಅವು ವರ್ಷದಲ್ಲಿ ಬಳಕೆಯಾಗುವ 3 ತಿಂಗಳುಗಳಿಗೆ ಮಾತ್ರ ಅನ್ವಯಿಸುವಂತೆ ಕನಿಷ್ಟ ದರ ನಿಗದಿ ಮಾಡಿ ವಸೂಲಿ ಮಾಡಲು ಸರ್ಕಾರ ಈ ಕೂಡಲೇ ಕ್ರಮ ವಹಿಸುವುದೇ:	
ಇ)	ಕಳೆದ ಹಲವಾರು ವರ್ಷಗಳಲ್ಲಿ ಸಂಭವಿಸಿದ ಪ್ರಕೃತಿ ವಿಕೋಪದಿಂದ ಕಾಫಿ ಬೆಳೆ ಹಾಳಾಗಿರುವುದು ಮತ್ತು ಸತತ ಬೆಲೆ ಕುಸಿತದಿಂದಾಗಿ ಕೊಡಗಿನ ಕಾಫಿ ಬೆಳೆಗಾರರು ತೀವ್ರ ಆರ್ಥಿಕ ಸಂಕಷ್ಟಕ್ಕೆ ಸಿಲುಕಿರುವುದನ್ನು ಪರಿಗಣಿಸಿ, ಕೊಡಗು ಜಿಲ್ಲೆಯಲ್ಲಿನ ಕಾಫಿ ಬೆಳೆಗಾರರು ಬಳಸುವ 10 ಅಶ್ವಶಕ್ತಿವರೆಗಿನ ಪಂಪ್‌ಸೆಟ್‌ಗಳಿಗೆ ಉಚಿತ ವಿದ್ಯುತ್ ಪೂರೈಕೆ ಮಾಡಲು ಸರ್ಕಾರ ಈ ಕೂಡಲೇ ಕ್ರಮ ವಹಿಸುವುದೇ?	• ರಾಜ್ಯ ಸರ್ಕಾರವು 2020-21ನೇ ಸಾಲಿನ ಆಯವ್ಯಯದ ಕಂಡಿಕೆ-197 ರಲ್ಲಿ "ಸಣ್ಣ ಮತ್ತು ಮಧ್ಯಮ ಕಾಫಿ ಮತ್ತು ಟೀ ಬೆಳೆಗಾರರ 10 ಹೆಚ್.ಪಿ.ವರೆಗಿನ ಪಂಪುಸೆಟ್ಟುಗಳ ವಿದ್ಯುತ್ ಶುಲ್ಕವನ್ನು ಮರುಪಾವತಿಸಲು ಒಂದು ಯೋಜನೆಯನ್ನು ರೂಪಿಸಲಾಗುವುದು" ಎಂದು ಘೋಷಿಸಲಾಗಿರುತ್ತದೆ. • ಆದರೆ, "ರಾಜ್ಯದಲ್ಲಿ ಕೋವಿಡ್-19 ನಿಂದ ಉಂಟಾಗಿರುವ ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸುವ ನಿಟ್ಟಿನಲ್ಲಿ ಸಂಪನ್ಮೂಲವನ್ನು ಕ್ರೋಢೀಕರಿಸಲು ವೆಚ್ಚದ ಬಾಬ್ತಿನಲ್ಲಿ ಮಿತವ್ಯಯವನ್ನು ಪಾಲಿಸುವುದು ಅನಿವಾರ್ಯವಾಗಿದೆ ಮತ್ತು ಈಗಾಗಲೇ ರೈತರಿಗೆ ಪಿ.ಎಂ.ಕೆ.ಎಸ್.ವೈ.ನಂತಹ ಹಲವು ಯೋಜನೆಗಳನ್ನು ಘೋಷಿಸಲಾಗಿರುವುದರಿಂದ ಸದರಿ ಘೋಷಣೆಯನ್ನು ಕೈಬಿಡಲಾಗಿರುತ್ತದೆ.

ಸಂಖ್ಯೆ: ಎನರ್ಜಿ 49 ಇಬಿಎಸ್ 2021

ಬಿ.ಎಸ್. ಯಡಿಯೂರಪ್ಪ
(ಬಿ.ಎಸ್.ಯಡಿಯೂರಪ್ಪ)
ಮುಖ್ಯಮಂತ್ರಿ